ಅನುಬಂಧ 'ಎ' – ದಾಖಲಾತಿ ಪರಿಶೀಲನೆಗೆ ಹಾಜರು ಪಡಿಸಬೇಕಾದ ಮೂಲ ದಾಖಲೆಗಳ ವಿವರಗಳನ್ನು ಈ ಕೆಳಗೆ ನೀಡಲಾಗಿದೆ.

ಈ ಮುಂದೆ ಹೇಳಿರುವ ಮೂಲ ದಾಖಲೆಗಳು ಮತ್ತು ಗೆಜೆಟೆಡ್ ಅಧಿಕಾರಿಯಿಂದ ದೃಢೀಕರಿಸಿರುವ ಅವುಗಳ ಜೆರಾಕ್ಸ್ ಪ್ರತಿಗಳ ಒಂದು ಸೆಟ್ಟನ್ನು, ಈ ಮುಂದೆ ಹೇಳಲಾಗಿರುವ ಅನುಕ್ರಮಣಿಕೆಯ ಕ್ರಮದಲ್ಲಿ ಜೋಡಿಸಿಕೊಳ್ಳಬೇಕು ಮತ್ತು ಹಾಗೆಯೇ, ಅವುಗಳನ್ನು ದಾಖಲೆಗಳ ಪರಿಶೀಲನೆಗೆ ಸಂಬಂಧಿಸಿದ ಕೌಂಟರ್‌ನಲ್ಲಿ ಪರಿಶೀಲನೆಗಾಗಿ ಹಾಜರುಪಡಿಸಬೇಕು.

ಎ. ಸಾಮಾನ್ಯ ಪ್ರವೇಶ ಪರೀಕ್ಷೆ–2018ಕ್ಕೆ ಭರ್ತಿ ಮಾಡಿ ಸಲ್ಲಿಸಿರುವ ಆನ್‌ಲೈನ್ ಅರ್ಜಿ ನಮೂನೆಯ ಅಂತಿಮ ಪ್ರತಿ.

ಬಿ. ಅರ್ಜಿ ಶುಲ್ಕ ಸಂದಾಯ ಮಾಡಿರುವುದಕ್ಕೆ ಸಂಬಂಧಿಸಿದ ಚಲನ್‌ನ ಮೂಲ ಪ್ರತಿ.

ಸಿ. "ಸಾಮಾನ್ಯ ಪ್ರವೇಶ ಪರೀಕ್ಷೆ 2018"ರ ಮೂಲ ಪ್ರವೇಶ ಪತ್ರ

ಡಿ. ಎಸ್‌ಎಸ್‌ಎಲ್‌ಸಿ/ 10ನೇ ತರಗತಿಯ ಅಂಕಪಟ್ಟಿ

ಇ. ದ್ವಿತೀಯ ಪಿಯುಸಿ/ 12ನೇ ತರಗತಿಯ ಅಂಕಪಟ್ಟಿ

ಎಫ್. ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿ/ ಸಾರ್ವಜನಿಕ ಶಿಕ್ಷಣ ಉಪ ನಿರ್ದೇಶಕರು ಮೇಲುರುಜು ಸಹಿ ಮಾಡಿರುವ ವ್ಯಾಸಂಗ ಪ್ರಮಾಣಪತ್ರ.

ಜಿ. ಪಾಸ್‌ಪೋರ್ಟ್ ಅಳತೆಯ ಇತ್ತೀಚಿನ ಎರಡು ಭಾವಚಿತ್ರಗಳು

ಮುಂದಿನ ದಾಖಲೆಗಳನ್ನು "ಅನ್ವಯವಾಗುವಂತಿದ್ದ ಪಕ್ಷದಲ್ಲಿ ಮಾತ್ರ" ಹಾಜರುಪಡಿಸತಕ್ಕದ್ದು:

ಹೆಚ್. "ಸಂಖ್ಯಾಧಿಕ ಕೋಟಾ" (supernumerary quota) ದ ಸೀಟುಗಳನ್ನು ಕೋರುವುದಕ್ಕೆ ಸಂಬಂಧಿಸಿದಂತೆ, ಸಂಬಂಧಪಟ್ಟ ತಹಸೀಲ್ದಾರ್‌ರವರಿಂದ ಪಡೆದುಕೊಂಡಿರುವ ಆದಾಯ ಪ್ರಮಾಣಪತ್ರ

ಐ. ಕನ್ನಡ ಮಾಧ್ಯಮ ಮೀಸಲಾತಿ ಪ್ರಯೋಜನವನ್ನು ಕೋರುವ ವಿದ್ಯಾರ್ಥಿಗಳಿಗೆ ಸಂಬಂಧಿಸಿದಂತೆ, ಕ್ಷೇತ್ರ ಶಿಕ್ಷಣಾಧಿಕಾರಿಗಳು ಮೇಲುರುಜು ಮಾಡಿರುವ ಕನ್ನಡ ಮಾಧ್ಯಮ ಪ್ರಮಾಣಪತ್ರ.

ಜೆ. ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮೇಲುರುಜು ಮಾಡಿರುವ ಗ್ರಾಮೀಣ ವ್ಯಾಸಂಗ ಪ್ರಮಾಣಪತ್ರ ಮತ್ತು ಪರಿಶೀಲನಾ ಪ್ರಮಾಣಪತ್ರ (ಸಾಮಾನ್ಯ ವರ್ಗದ ವಿದ್ಯಾರ್ಥಿಗಳಿಗೆ ಮಾತ್ರ)

ಕೆ. ಮೀಸಲಾತಿ ಪ್ರಯೋಜನಗಳನ್ನು ಕೋರುವುದಕ್ಕೆ ಸಂಬಂಧಿಸಿದಂತೆ, ಸಂಬಂಧಪಟ್ಟ ತಹಸೀಲ್ದಾರ್‌ರವರಿಂದ ಪಡೆದಿರುವ ಜಾತಿ ಪ್ರಮಾಣ ಪತ್ರ/ ಜಾತಿ ಮತ್ತು ಆದಾಯ ಪ್ರಮಾಣಪತ್ರ/ ಆದಾಯ ಪ್ರಮಾಣ ಪತ್ರಗಳು (ಅಧಿಕಾರವ್ಯಾಪ್ತಿಯಿರುವ ಸಂಬಂಧಪಟ್ಟ ತಹಸೀಲ್ದಾರ್‌ರವರು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಸಂದರ್ಭದಲ್ಲಿ ನಮೂನೆ 'ಡಿ' ನಲ್ಲಿ ಮತ್ತು ಪ್ರವರ್ಗ–1ರ ಸಂದರ್ಭದಲ್ಲಿ ನಮೂನೆ 'ಇ' ನಲ್ಲಿ ಇತರ ಹಿಂದುಳಿದ ವರ್ಗಗಳಾದ 2ಎ, 2ಬಿ, 3ಎ ಮತ್ತು 3ಬಿಗಳಂತಹ ಸಂದರ್ಭದಲ್ಲಿ ನಮೂನೆ 'ಎಫ್' ನಲ್ಲಿ ನೀಡಿರುವ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳು)

ಸೂಚನೆ: ಅಲ್ಲದೆ, ಮೀಸಲು ಪ್ರವರ್ಗದಡಿಯಲ್ಲಿ ಸೀಟನ್ನು ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ–1ಕ್ಕೆ ಸೇರಿರುವ ವಿದ್ಯಾರ್ಥಿಗಳು, ಅಧಿಕಾರವ್ಯಾಪ್ತಿಯ ತಹಸೀಲ್ದಾರ್‌ರವರು ನೀಡಿರುವ ಆದಾಯ ಪ್ರಮಾಣಪತ್ರವನ್ನು ಸಹ ಪರಿಶೀಲನೆಗಾಗಿ ಹಾಜರುಪಡಿಸಬೇಕು.

ಆದರೆ, ವಿದ್ಯಾರ್ಥಿ/ನಿ, ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವಾಗ, ಮೀಸಲಾತಿ ಪ್ರಯೋಜನವನ್ನು ಕೋರಿದ್ದ ಪಕ್ಷದಲ್ಲಿ ಮಾತ್ರ ಅವರು ಜಾತಿ, ಪ್ರವರ್ಗ ಮತ್ತು ಆದಾಯದ ಸೌಲಭ್ಯಗಳನ್ನು ಕೋರಲು ಅರ್ಹರಾಗಿರುತ್ತಾರೆ.

ಎಲ್. ಹೈದರಾಬಾದ್–ಕರ್ನಾಟಕ ಪ್ರದೇಶ ಮೀಸಲಾತಿ (ಅನುಚ್ಛೇದ 371 (ಜೆ))ಯನ್ನು ಕೋರುವ ವಿದ್ಯಾರ್ಥಿಗಳು, ಸಂಬಂಧಪಟ್ಟ ಉಪ ವಿಭಾಗಾಧಿಕಾರಿ (ಅಸಿಸ್ಟೆಂಟ್ ಕಮಿಷನರ್)ಅವರು ಅನುಬಂಧ–ಎ (ಅರ್ಹತಾ ಪ್ರಮಾಣಪತ್ರ–ನಿಯಮ 3(3))ರಲ್ಲಿ ನೀಡಿರುವ ಪ್ರಮಾಣಪತ್ರವನ್ನು ದಾಖಲೆಗಳ ಪರಿಶೀಲನೆಯ ಸಮಯದಲ್ಲಿ ಸಲ್ಲಿಸಬೇಕು.

ಎಂ. ತಂದೆ–ತಾಯಿ/ ಪೋಷಕರ, ವಾಸ ಸ್ಥಳ/ ವ್ಯಾಸಂಗ/ ಉದ್ಯೋಗದ ಆಧಾರದ ಮೇಲೆ ಸರ್ಕಾರಿ ಸೀಟುಗಳಿಗೆ ಸಂಬಂಧಿಸಿದಂತೆ ಅರ್ಹತೆಯನ್ನು ಕೋರುವ ವಿದ್ಯಾರ್ಥಿಗಳು, ಅವರ ತಂದೆ–ತಾಯಿ/ ಪೋಷಕರ ವ್ಯಾಸಂಗ ಪ್ರಮಾಣಪತ್ರ/ ತಂದೆ–ತಾಯಿ/ ಪೋಷಕರ ಸ್ವಂತ ಪಟ್ಟಣ/ ಸ್ವಂತ ಊರಿನ ಪ್ರಮಾಣಪತ್ರ/ ತಂದೆ–ತಾಯಿ/ಪೋಷಕರ ವಾಸಸ್ಥಳದ ಪ್ರಮಾಣಪತ್ರ/ ತಂದೆ–ತಾಯಿ/ ಪೋಷಕರ ಉದ್ಯೋಗ ಪ್ರಮಾಣಪತ್ರ/ ತಂದೆ–ತಾಯಿ/ ಪೋಷಕರ ಸಂಚಿತ ದಾಖಲೆ/ ತಂದೆ–ತಾಯಿ/ಪೋಷಕರ ಅಂಕಪಟ್ಟಿ ಮೊದಲಾದವುಗಳನ್ನು ಹಾಜರುಪಡಿಸಬೇಕು.

ಎನ್. ಹೊರನಾಡು ಮತ್ತು ಗಡಿನಾಡು ಕನ್ನಡಿಗ ಕೋಟಾದ ಅಡಿಯಲ್ಲಿ ಅರ್ಹತೆಯನ್ನು ಕೋರುವಂತಹ ವಿದ್ಯಾರ್ಥಿಗಳು ಯುಕ್ತವಾಗಿ ಘೋಷಿಸಿರುವ ಅಫಿಡವಿಟ್ಟನ್ನು ಹಾಜರುಪಡಿಸಬೇಕು (ಖಂಡ ಸಿ & ಡಿ).

ಓ. ಜಮ್ಮು ಮತ್ತು ಕಾಶ್ಮೀರದ ವಲಸಿಗರ ಕೋಟಾದ ಅಡಿಯಲ್ಲಿ ಸರ್ಕಾರಿ ಸೀಟುಗಳಿಗೆ ಸಂಬಂಧಿಸಿದಂತೆ ಅರ್ಹತೆಯನ್ನು ಕೋರುವ ವಿದ್ಯಾರ್ಥಿಗಳು, ಅಧಿಕಾರವ್ಯಾಪ್ತಿಯ ಜಿಲ್ಲಾಧಿಕಾರಿ/ ಜಿಲ್ಲಾ ದಂಡಾಧಿಕಾರಿ/ ಪುನರ್ವಸತಿ ಆಯುಕ್ತರು ನೀಡಿರುವ ಗುರುತಿನ ಚೀಟಿಯನ್ನು ಹಾಜರುಪಡಿಸಬೇಕು.